65 (143) ಶ್ರೀ ಪ್ರಭಾಕರ ಬಂಗೇರ ಕೆ. (ಬೆಳ್ತಂಗಡಿ): ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಬೆಳ್ತಂಗಡಿ ತಾಲ್ಲೂಕು ವ್ಯಾಪ್ತಿಯಲ್ಲಿರುವ ಪ್ರೌಢ ಮತ್ತು ಪ್ರಾಥಮಿಕ ಶಾಲೆಗಳಲ್ಲಿ ಖಾಲಿ ಇರುವ ಮುಖ್ಯೋಪಾಧ್ಯಾಯರ ಮತ್ತು ಶಿಕ್ಷಕರುಗಳ ಹುದ್ದೆಗಳು ಎಷ್ಟು?

ಆ) ಇವುಗಳನ್ನು ತುಂಬಲು ಸರಕಾರದ ಸಕಾಲಿಕ ಕ್ರಮಗಳೇನು?

ಇ) ಗ್ರಾಮಾಂತರ ಪ್ರದೇಶಗಳಲ್ಲಿನ ವಿದ್ಯಾರ್ಥಿಗಳ ಶೈಕ್ಷಣಿಕ ಅಭಿವೃದ್ಧಿಯನ್ನು ಗಮನಿಸಿ ಕೂಡಲೇ ಖಾಲಿ ಹುದ್ದೆಗಳನ್ನು ತುಂಬಲು ಸರಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ಬಸವರಾಜ ಎಸ್. ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ)

| | ಮುಖ್ಯೋಪಾಧ್ಯಾಯರ ಖಾಲಿ ಇರುವ ಹುದ್ದೆಗಳ ಸಂಖ್ಯೆ | ಸಹ ಶಿಕ್ಷಕರುಗಳ ಖಾಲಿ ಇರುವ ಹುದ್ದೆಗಳ ಸಂಖ್ಯೆ |
|---|---|---|
| ಪ್ರಾಥಮಿಕ ಶಾಲೆ | 29 | 98 |
| ಪ್ರೌಢ ಶಾಲೆ | 16 | 18 |

ಆ) * ಸರ್ಕಾರಿ ಹಿರಿಯ ಪ್ರಾಥಮಿಕ ಹಾಗೂ ಮಾದರಿ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ ಖಾಲಿ ಇರುವ ಮುಖ್ಯ ಶಿಕ್ಷಕರ ಮತ್ತು ಪದವೀಧರೇತರ ಮುಖ್ಯ ಶಿಕ್ಷಕರ ಖಾಲಿ ಹುದ್ದೆಗಳನ್ನು ಬಡ್ತಿಯ ಮೂಲಕ ತುಂಬಲು ಈಗಾಗಲೇ ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರಿಗೆ ಸುತ್ತೋಲೆ ಹೊರಡಿಸಲಾಗಿದೆ.

* ಖಾಲಿ ಇರುವ ಸರ್ಕಾರಿ ಪ್ರಾಥಮಿಕ ಶಾಲಾ ಸಹಶಿಕ್ಷಕರ ಹುದ್ದೆಗಳ ಭರ್ತಿಗೆ ಅಧಿಸೂಚನೆ ಹೊರಡಿಸಿದ್ದು, ಈ ನೇಮಕಾತಿ ಸಂಬಂಧ ಪ್ರಕರಣವು ರಾಜ್ಯ ಉಚ್ಚ ನ್ಯಾಯಾಲಯದಲ್ಲಿ ದಾವೆ ಇದ್ದು, ಈ ದಾವೆ ಇತ್ಯರ್ಥವಾದ ಕೂಡಲೇ ಭರ್ತಿ ಮಾಡಲಾಗುವುದು.

* ಪ್ರಸ್ತುತ ಖಾಲಿ ಇರುವ ಪ್ರೌಢ ಶಾಲಾ ಮುಖ್ಯ ಶಿಕ್ಷಕರ ಎಲ್ಲಾ ಹುದ್ದೆಗಳು ನೇರ ನೇಮಕಾತಿಗೆ ಮೀಸಲಿರುವ ಹುದ್ದೆಗಳಾಗಿದ್ದು, ಸದರಿ ಹುದ್ದೆಗಳನ್ನು ಕೆ.ಪಿ.ಎಸ್.ಸಿ. ಮುಖಾಂತರ ತುಂಬ ಬೇಕಿದ್ದು, ಕೆ.ಪಿ.ಎಸ್.ಸಿ. ಮುಖೇನ ನೇಮಕಾತಿ ಪ್ರಕ್ರಿಯೆ ವಿಳಂಬವಾಗುತ್ತಿರುವ ಕಾರಣದಿಂದ, ಅರ್ಹ ಪ್ರೌಢ ಶಾಲಾ ಗ್ರೇಡ್-1 ಸಹ ಶಿಕ್ಷಕರುಗಳನ್ನು ನಿಯಮ-32 ರಡಿ ಸ್ವತಂತ್ರ ಪ್ರಭಾರದಲ್ಲಿರಿಸಲಾಗಿದೆ.

* ನೇರ ನೇಮಕಾತಿ ಮೂಲಕ ತುಂಬುವ ಮುಖ್ಯ ಶಿಕ್ಷಕರುಗಳ ಖಾಲಿ ಹುದ್ದೆಗಳನ್ನು ತುಂಬುವ ಬಗ್ಗೆ ಪ್ರಸ್ತುತ ಜಾರಿಯಲ್ಲಿರುವ ಬಡ್ತಿ ಶೇ 50 ಇರುವುದನ್ನು ಶೇ 75 ಎಂದು ಹೆಚ್ಚಿಸಲು ನಿಯಮಗಳಿಗೆ ತಿದ್ದುಪಡಿ ತರುವುದು ಸರ್ಕಾರದ ಪರಿಶೀಲನೆಯಲ್ಲಿದ್ದು, ಈ ಬಗ್ಗೆ ಶೀಘ್ರವೇ ಮುಂದಿನ ಕ್ರಮ ವಹಿಸಲಾಗುವುದು.

* 2005–06 ನೇ ಸಾಲಿನಲ್ಲಿ 2104 ಪ್ರೌಢಶಾಲಾ ಸಹಶಿಕ್ಷಕರುಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲಾಗಿದೆ. ಅಲ್ಲದೇ, ಈ ರೀತಿ ನೇಮಕವಾದ ಶಿಕ್ಷಕರನ್ನು ಗ್ರಾಮಾಂತರ ಪ್ರದೇಶಗಳಿಗೆ ಸ್ಥಳನಿಯುಕ್ತಿಗೊಳಿಸಲು ಒತ್ತು ನೀಡಲಾಗಿದೆ. ಜೊತೆಗೆ ಹೆಚ್ಚುವರಿ ಇರುವ ಶಿಕ್ಷಕರನ್ನು ಶಿಕ್ಷಕರ ಕೊರತೆ ಇರುವ ಪ್ರೌಢ ಶಾಲೆಗಳಿಗೆ ನಿಯೋಜನೆ ಮಾಡಲಾಗಿದೆ. ಈ ದಿಸೆಯಲ್ಲಿ ವಿದ್ಯಾರ್ಥಿಗಳ ಶೈಕ್ಷಣಿಕ ಅಭಿವೃದ್ಧಿಗೆ ತೊಂದರೆಯಾಗದಂತೆ ಕ್ರಮ ವಹಿಸಲಾಗಿದೆ.

ಇ) ಹೌದು. ಮೇಲೆ ತಿಳಿಸಿದಂತೆ ಕ್ರಮ ಕೈಗೊಳ್ಳಲಾಗುತ್ತಿದೆ.

66 (144) ಶ್ರೀ ಪ್ರಭಾಕರ ಬಂಗೇರ ಕೆ. (ಬೆಳ್ತಂಗಡಿ): ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಸಣ್ಣ ನೀರಾವರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿರುವ ಎಷ್ಟು ಸಣ್ಣ ಮತ್ತು ದೊಡ್ಡ ಕೆರೆಗಳನ್ನು 2003–04 ಮತ್ತು 2004–05ನೇ ಸಾಲಿನಲ್ಲಿ ಹೂಳೆತ್ತಿ ಅಭಿವೃದ್ಧಿಪಡಿಸುವ ಕಾಮಗಾರಿಯನ್ನು ಕೈಗೊಳ್ಳಲಾಗಿದೆಯೇ;

ಆ) ಈ ಕಾಮಗಾರಿಗಳಿಗಾಗಿ ಮಂಜೂರಾದ ಹಣದ ಮೊತ್ತ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು);

ಇ) ಕೆರೆಗಳ ಹೂಳೆತ್ತಿ ಅಭಿವೃದ್ಧಿಪಡಿಸುವ ಮೂಲಕ ನೀರಾವರಿ ಸೌಲಭ್ಯಗಳೊಂದಿಗೆ ಅಂತರ್ಜಲ ಮಟ್ಟದಲ್ಲಿ ಸುಧಾರಣೆ ಸಾಧಿಸುವ ಕುರಿತು ಸರ್ಕಾರ ಆದ್ಯತೆಯನ್ನು ನೀಡುವುದೇ?

ಶ್ರೀ ಸಿ.ಎಂ. ಉದಾಸಿ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಸಣ್ಣ ನೀರಾವರಿ ಸಚಿವರು) :

ಅ) 2003–04ನೇ ಸಾಲಿನಲ್ಲಿ ಸಣ್ಣ ಪ್ರಮಾಣದ 6 ಕೆರೆಗಳನ್ನು ಅಭಿವೃದ್ಧಿಪಡಿಸಲಾಗಿದೆ.

ಆ) ರೈತ ಕಾಯಕ ಕೆರೆ ಯೋಜನೆಯಡಿ 2003–04ನೇ ಸಾಲಿನಲ್ಲಿ ಅಭಿವೃದ್ಧಿಪಡಿಸಿರವ ಕೆರೆಗಳ ವೆಚ್ಚದ ವಿವರಗಳು ಈ ಕೆಳಕಂಡಂತಿದೆ;

(ರೂ. ಲಕ್ಷಗಳಲ್ಲಿ)

| ಕ್ರ. ಸಂ | ತಾಲ್ಲೂಕು | ಕಾಮಗಾರಿ ಸಂಖ್ಯೆ | ಆಗಿರುವ ವೆಚ್ಚ |
|---|---|---|---|
| 1 | ಬಂಟ್ವಾಳ | 1 | 4.00 |
| 2 | ಪುತ್ತೂರು | 1 | 1.12 |
| 3 | ಬೆಳ್ತಂಗಡಿ | 1 | 5.84 |
| 4 | ಮಂಗಳೂರು | 3 | 17.18 |

ಇ) ಹೌದು.